ಶ್ರೀ ಕೆ.ಎಸ್. ಈಶ್ವರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಪ್ರಸಕ್ತ 2012–13ನೇ ಸಾಲಿನಲ್ಲಿ 5ನೇ ಹಂತದ ಯೋಜನೆಯನ್ನು ಅನುಷ್ಠಾನ ಮಾಡಲು ಗ್ರಾಮಗಳ ಆಯ್ಕೆಗಾಗಿ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:29:ಸುಗ್ರಾಯೋ:2012 ದಿ:29.06.2012 ರಲ್ಲಿ ಆದೇಶ ಹೊರಡಿಸಲಾಗಿದೆ. ಅದರಂತೆ ಜುಲೈ ತಿಂಗಳಿನಿಂದ ಗ್ರಾಮಗಳ ಆಯ್ಕೆ ಪ್ರಕ್ರಿಯೆ ಪ್ರಾರಂಭವಾಗಿದೆ.

ಆ) ಇದೆ.

a) The Government Order No.RDP:29:SGY:2012 dated: 29.06.2012. has been issued for implementation of 5th stage Suvarna Gramodaya in the state. The Selection of villages process is already started.

b) Yes.

ವಿಶೇಷ ಅನುದಾನ ಬಿಡುಗಡೆ

437 (779) ಶ್ರೀ ಡಾ: ಮಾಲಕರೆಡ್ಡಿ ಎ.ಬಿ. (ಯಾದಗಿರಿ) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;–

ಅ) ಮುಖ್ಯಮಂತ್ರಿಯವರ ವಿಶೇಷ ಅನುದಾನದಲ್ಲಿ ಯಾದಗಿರಿ ಜಿಲ್ಲೆಯ ಗ್ರಾಮೀಣ ರಸ್ತೆ ಮತ್ತು ಸೇತುವೆಗಳ ಅಭಿವೃದ್ಧಿಗೆ 24 ಕೋಟಿ ರೂ. ಪ್ರಸ್ತಾವನೆ ಸಿದ್ದಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದರೆ, ಅದರಲ್ಲಿ ಸುರಪುರ ಕ್ಷೇತ್ರವೊಂದನ್ನು 23 ಕೋಟಿ ರೂ.ಗಳನ್ನು ನಿಗಧಿಪಡಿಸಿ, ಉಳಿದ ಕ್ಷೇತ್ರಗಳನ್ನು ನಿರ್ಲಕ್ಷಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಅನುದಾನ ಹಂಚಿಕೆಯ ತಾರತಮ್ಯಗಳನ್ನು ಸರ್ಕಾರ ಸರಿಪಡಿಸುವುದೇ?

ಶ್ರೀ ಕೆ.ಎಸ್. ಈಶ್ವರಪ್ಪ (ಉಪ ಮುಖ್ಯಮಂತ್ರಿಗಳು) :

ಅ) ಮತ್ತು ಆ) – ಇಲ್ಲ. ಆದರೆ, ದಿನಾಂಕ: 4–10–2010 ರಂದು ಜರುಗಿದ ಸಚಿವ ಸಂಪುಟದ ನಿರ್ಣಯದಂತೆ ಹೊಸದಾಗಿ ಸೃಜನೆಯಾದ

ಯಾದಗಿರಿ ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ರಸ್ತೆ ಅಭಿವೃದ್ಧಿ ಹಾಗೂ ಮೋರಿ ನಿರ್ಮಾಣ ಕಾಮಗಾರಿಗಳನ್ನು ರೂ.22.10 ಕೋಟಿ ಮೊತ್ತದಲ್ಲಿ ಗ್ರಾಮೀಣ ಸಂಪರ್ಕ ಯೋಜನೆ ಲೆಕ್ಕಶೀರ್ಷಿಕೆ–5054 ರಡಿ 3 ವರ್ಷಗಳ ಅವಧೀಗೆ ಪ್ಯಾಕೆಜ್ ಕಾರ್ಯಕ್ರಮಕ್ಕೆ ದಿನಾಂಕ: 25–10–2010 ರಂದು ಅನುಮೋದನೆ ನೀಡಲಾಗಿದೆ.

ಈ ಪ್ಯಾಕೇಜ್ ಕಾರ್ಯಕ್ರಮದಂತೆ ಯಾದಗಿರಿ ತಾಲ್ಲೂಕಿಗೆ ರೂ.1.00 ಕೋಟಿ ಹಾಗೂ ಸುರಪುರ ತಾಲ್ಲೂಕಿಗೆ ರೂ.21.10 ಕೋಟಿ ಮೊತ್ತದ ಕಾಮಗಾರಿಗಳು ಒಳಗೊಂಡಿರುತ್ತದೆ.

ಇ) ಮತಕ್ಷೇತ್ರವಾರು ಅನುದಾನ ಹಂಚಿಕೆ ಮಾಡಿಲ್ಲದಿರುವುದರಿಂದ ತಾರತಮ್ಯದ ಪ್ರಶ್ನೆ ಉದ್ಭವಿಸುವುದಿಲ್ಲ.

ಗ್ರಾಮಾಂತರ ಪ್ರದೇಶಗಳ ಶೌಚಾಲಯಗಳು

423 (388) ಶ್ರೀ ಬಂಡೆಪ್ಪ ಖಾಶೆಂಪೂರ (ಬೀದರ್ ದಕ್ಷಿಣ) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;–

ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಗ್ರಾಮಾಂತರ ಪ್ರದೇಶಗಳಲ್ಲಿ ಎಲ್ಲಾ ಗ್ರಾಮದ ಮನೆಗಳಲ್ಲೂ ಶೌಚಾಲಯಗಳನ್ನು ನಿರ್ಮಿಸ ಲಾಗಿದೆಯೇ;

ಆ) ಹಾಗಿದ್ದಲ್ಲಿ, ಈ ಶೌಚಾಲಯಗಳನ್ನು ಯಾವ ಯಾವ ಯೋಜನೆಯಿಂದ ನಿರ್ಮಿಸಲಾಗಿದೆ; (ವಿವರಗಳನ್ನು ನೀಡುವುದು)

ಇ) ಪ್ರತಿ ಶೌಚಾಲಯಕ್ಕೆ ಸರ್ಕಾರ ನೀಡುತ್ತಿರುವ ಸಹಾಯಧನದ ಮೊತ್ತವೆಷ್ಟು; ಶೌಚಾಲಯ ನಿರ್ಮಿಸಿರುವ ಎಲ್ಲರಿಗೂ ಸಹಾಯಧನ ನೀಡಲಾಗಿದೆಯೇ–

ಈ) ಈಗ ನೀಡುತ್ತಿರುವ ಸಹಾಯ ಧನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಶ್ರೀ ಕೆ.ಎಸ್. ಈಶ್ವರಪ್ಪ (ಉಪ ಮುಖ್ಯಮಂತ್ರಿಗಳು) :

ಅ) ಸಂಪೂರ್ಣ ಸ್ವಚ್ಛತಾ ಆಂದೋಲನ ಕಾರ್ಯಕ್ರಮವು ಪುನರ್ ನಾಮಕರಣಗೊಂಡು ನಿರ್ಮಲ್ ಭಾರತ್ ಅಭಿಯಾನ ಕಾರ್ಯಕ್ರಮದಡಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಗ್ರಾಮೀಣ ಪ್ರದೇಶಗಳ ಎಲ್ಲಾ ಗ್ರಾಮ